ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಕರ್ನಾಟಕ ವಿಧಾನ ಸಭೆ ಸಚಿವಾಲಯ

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯ ಕರ್ನಾಟಕ ದಿನಾಂಕ : DATE : 07/06/2019

# ವಿಶೇಷ ಮಂಡಳಿಯ ಆದೇಶ ಸಲ್ಲಿಸಿ

## ವಿಧಾನಸಭೆ ಕಾರ್ಯದರ್ಶಿ ಎಸ್. ಮೂರ್ತಿ ಅಮಾನತು ವಿಚಾರ

**ಬೆಂಗಳೂರು:** ವಿಧಾನಸಭೆ ಕಾರ್ಯದರ್ಶಿ ಹುದ್ದೆಯಿಂದ ಎಸ್. ಮೂರ್ತಿಯನ್ನು ಅಮಾನತುಗೊಳಿಸಿರುವ ವಿಚಾರಕ್ಕೆ ಸಂಬಂಧಿಸಿದಂತೆ ವಿಧಾನಸಭೆಯ ವಿಶೇಷ ಮಂಡಳಿ ಹೊರಡಿಸಿದ್ದ ಆದೇಶದ ಪ್ರತಿಯನ್ನು ಸಲ್ಲಿಸುವಂತೆ ಹೈಕೋರ್ಟ್ ಗುರುವಾರ ರಾಜ್ಯ ಸರಕಾರಕ್ಕೆ ನಿರ್ದೇಶನ ನೀಡಿತು.

ಅಮಾನತು ಆದೇಶಕ್ಕೆ ತಡೆ ನೀಡಲು ನಿರಾಕರಿಸಿರುವ ಏಕಸದಸ್ಯಪೀಠದ ಆದೇಶ ಪ್ರಶ್ನಿಸಿ ಸಲ್ಲಿಸಿರುವ ಮೇಲ್ಮನವಿ ಮುಖ್ಯ ನ್ಯಾಯಮೂರ್ತಿ ಎ.ಎಸ್. ಓಕ್ ಮತ್ತು ನ್ಯಾಯಮೂರ್ತಿ ಪಿ. ಎಸ್.ದಿನೇಶ್ ಕುಮಾರ್ ಅವರಿದ್ದ ವಿಭಾಗೀಯ ಪೀಠದ ಮುಂದೆ ವಿಚಾರಣೆಗೆ ಬಂದಿತು.

ಅರ್ಜಿದಾರರ ಪರ ಎ.ಎಸ್.ಪೊನ್ನಣ್ಣ ''ಸಚಿವಾಲಯದ ಅಧೀನ ಕಾರ್ಯದರ್ಶಿ ಅಮಾನತು ಆದೇಶ ಹೊರಡಿಸಿದ್ದಾರೆ. ಆದರೆ ಅವರಿಗೆ ಆ ಅಧಿಕಾರ ಇಲ್ಲ. ಆದೇಶವನ್ನು ಹೊರಡಿಸುವ ಅಧಿಕಾರ



ವಿಶೇಷ ಮಂಡಳಿಗೆ ಮಾತ್ರವೇ ಇದೆ. ಸಚಿವಾಲಯ ನಿಯಮವನ್ನು ಪಾಲನೆ ಮಾಡಿಲ್ಲ,'' ಎಂದರು.

ಅದಕ್ಕೆ ಉತ್ತರಿಸಿದ ಅಡ್ವೊಕೇಟ್ ಜನರಲ್ ಉದಯ್ ಹೊಳ್ಳ, ಅರ್ಜಿದಾರರ ವಿರುದ್ಧ ಕೆಲವು ಆರೋಪಗಳು ಕೇಳಿಬಂದಿದ್ದವು, ಆ ನಂತರ ತನಿಖೆ ನಡೆಸಲಾಗಿದೆ. ಬಳಿಕ ಮೇಲ್ನೋಟಕ್ಕೆ ಆರೋಪಗಳಲ್ಲಿ ಸತ್ಯಾಂಶವಿದೆ ಎಂದು ತಿಳಿದುಬಂದಿರುವುದರಿಂದ ವಿಶೇಷ ಮಂಡಳಿಯೇ ನಿರ್ಣಯ ಕೈಗೊಂಡು ಅಮಾನತು ಆದೇಶ ಹೊರಡಿಸಿದೆ'' ಎಂದು ಹೇಳಿದರು.

ಆಗ ನ್ಯಾಯಪೀಠ, ಹಾಗಿದ್ದರೆ ಮಂಡಳಿಯ ಆದೇಶದ ಪ್ರತಿಯನ್ನು ಸಲ್ಲಿಸಿ ಎಂದು ಎ.ಜಿ ಗೆ ನಿರ್ದೇಶನ ನೀಡಿ ವಿಚಾರಣೆಯನ್ನು ಜೂ.19ಕ್ಕೆ ಮುಂದೂಡಿತು.

1